ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

11. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
12. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
13. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆ

906 (1379) ಶ್ರೀ ಪಾಟೀಲ್ ಎಂ.ಬಿ (ಬಬಲೇಶ್ವರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2007-08, 2008-09ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಬಿ.ಸಿ.ಎಂ. ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆದ ವೈಯಕ್ತಿಕ ಕೊಳವೆ ಬಾವಿಯ ಸಂಖ್ಯೆ ಎಷ್ಟು (ವಿವರವಾದ ಮಾಹಿತಿ ಒದಗಿಸುವುದು);

ಆ) ಇವುಗಳಲ್ಲಿ ವಿದ್ಯುತ್ ಪೂರೈಕೆ ಮಾಡಿದ ಕೊಳವೆಬಾವಿಗಳು ಎಷ್ಟು (ವಿವರವಾದ ಮಾಹಿತಿ ನೀಡುವುದು);

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 2007-08ರಲ್ಲಿ ಒಟ್ಟು 514 ಹಾಗೂ 2008-09ರಲ್ಲಿ ಒಟ್ಟು 451 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ.

ಆ) ಒಟ್ಟು 66 ಕೊಳವೆ ಬಾವಿಗೆ ವಿದ್ಯುತ್ ಪೂರೈಕೆ ಮಾಡಿದ್ದು, ಉಳಿದ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ವಸತಿ ಶಾಲೆಗಳ ಕುರಿತು

907 (1188) ಶ್ರೀ ಪಾಟೀಲ್ ವಿ.ಎಸ್. (ಯಲ್ಲಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಲ್ಲಾಪುರ/ ಮುಂಡಗೋಡ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಖಾಲಿ ಇರುವ ಬೋಧಕ ಸಿಬ್ಬಂದಿ ಹುದ್ದೆಗಳು ಯಾವುವು? ಖಾಲಿ ಇರುವ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು?

ಆ) ಮುಂಡಗೋಡ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಅಂಗ್ಲ ಮಾಧ್ಯಮದಿಂದ ಕನ್ನಡ ಮಾಧ್ಯಮಕ್ಕೆ ಬದಲಾಯಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ)

ಕ್ರ ಸಂ.	ಹುದ್ದೆಗಳು	ಷರಾ
1.	ಕ್ರಾಪ್ಟ್ ಶಿಕ್ಷಕರು	ಹುದ್ದೆ ಖಾಲಿ ಇದೆ.
2.	ಗಣಕಯಂತ್ರ ಶಿಕ್ಷಕರು	
3.	ಸಂಗೀತ ಶಿಕ್ಷಕರು	

ಉಳಿದ ಹುದ್ದೆಗಳನ್ನು ಹೊರಸಂಪನ್ಮೂಲ ಹಾಗೂ ಗುತ್ತಿಗೆ ಶಿಕ್ಷಕರಿಂದ ತುಂಬಲಾಗಿದೆ.

Regular Recruitment ನಿಯಮಾನುಸಾರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

ಆ) ಜಿಲ್ಲಾ ಪಂಚಾಯತಿಯಿಂದ ಬೋಧನಾ ಮಾಧ್ಯಮದ ಬದಲಾವಣೆ ಮಾಡುವ ಬಗ್ಗೆ ಅನುಮೋದನೆ ನೀಡಲಾಗಿದೆ ಎಂದು ತಿಳಿದು ಬಂದಿದೆ.